# ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು ಇವರ ನಡವಳಿಗಳು

**ವಿಷಯ:** 2017-18ನೇ ಸಾಲಿನಲ್ಲಿ ಮಾನ್ಯ ಮುಖ್ಯಮಂತ್ರಿಗಳ ಅಲ್ಪಸಂಖ್ಯಾತರ ಅಭಿವೃದ್ಧಿ ಯೋಜನೆಯಡಿ ಅಲ್ಪಸಂಖ್ಯಾತರು ಹೆಚ್ಚಾಗಿ ವಾಸಿಸುವ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿ ಕಾಮಗಾರಿಗಳಿಗೆ ಅನುದಾನ ಬಿಡುಗಡೆ ಮಾಡುವ ಕುರಿತು.

**ಉಲ್ಲೇಖ:**
1) ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 169 ಎಂಡಿಎಸ್ 2017 ದಿನಾಂಕ: 06.04.2017
2) ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 169 ಎಂಡಿಎಸ್ 2017 ದಿನಾಂಕ: 25.04.2017 & 22.08.2017.
3) ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 192 ಎಂಡಿಎಸ್ 2017 ದಿನಾಂಕ: 19.08.2017.

>>>()<<<

**ಪ್ರಸ್ತಾವನೆ:-**

ಉಲ್ಲೇಖ(1)ರ ಸರ್ಕಾರಿ ಆದೇಶದಲ್ಲಿ 2016-17ನೇ ಸಾಲಿನಲ್ಲಿ ಚಾಲ್ತಿಯಲ್ಲಿರುವ ಯೋಜನೆಗಳನ್ನು 2017-18ನೇ ಸಾಲಿನವರೆಗೆ ಮುಂದುವರೆಸಲು ಆದೇಶಿಸಿದೆ. ಉಲ್ಲೇಖ (2)ರ ಸರ್ಕಾರಿ ಆದೇಶದಲ್ಲಿ 2017-18ನೇ ಸಾಲಿನ ವಿವಿಧ ಯೋಜನೆಯಡಿ ಒದಗಿಸಲಾದ ಆಯವ್ಯಯದಲ್ಲಿ ಮೊದಲನೇ ಮತ್ತು ಎರಡನೇ ತ್ರೈಮಾಸಿಕ ಕಂತಾಗಿ ಶೇ.50 ರಷ್ಟು ಅನುದಾನ ಬಿಡುಗಡೆ ಮಾಡಿ ಆದೇಶಿಸಿದೆ.

ಉಲ್ಲೇಖ(3)ರ ಸರ್ಕಾರದ ಆದೇಶದಲ್ಲಿ ದಿನಾಂಕ: 21.07.2017ರ ಆದೇಶದಲ್ಲಿ ಸೂಚಿಸಿರುವ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ರಾಜ್ಯದಲ್ಲಿನ ಒಟ್ಟು 224 ವಿಧಾನಸಭಾ ಕ್ಷೇತ್ರಗಳಿಗೆ ತಲಾ ರೂ. 50.00 ಲಕ್ಷಗಳನ್ನು ಹಾಗೂ ಕೊಳಗೇರಿ ಅಭಿವೃದ್ಧಿ ಮಂಡಳಿಯು ಅಭಿವೃದ್ಧಿ ಪಡಿಸುವ ವಸತಿ ಯೋಜನೆಯಡಿ ಅಲ್ಪಸಂಖ್ಯಾತರು ಶೇಕಡು 50 ರಷ್ಟು ನೆಲೆಸಿರುವ ಪ್ರದೇಶಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಆಯುಕ್ತರು, ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಇವರಿಗೆ ರೂ. 50.00 ಕೋಟಿಗಳ ಅನುದಾನವನ್ನು ಷರತ್ತುಗಳಿಗೊಳಪಟ್ಟು ಬಿಡುಗಡೆ ಮಾಡಲು ಮಂಜೂರಾತಿ ನೀಡಿ ಆದೇಶಿಸಿದೆ.

ಸದರಿ ಆದೇಶದನ್ವಯ 224 ವಿಧಾನಸಭಾ ಕ್ಷೇತ್ರಗಳಲ್ಲಿ ಅಲ್ಪಸಂಖ್ಯಾತರು ಹೆಚ್ಚಾಗಿ ವಾಸಿಸುವ ಪ್ರದೇಶಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವ ಕಾಮಗಾರಿಗಳಿಗೆ ರೂ.112.00 ಕೋಟಿ (ರೂ. ಒಂದುನೂರ ಹನ್ನೇರಡು ಕೋಟಿಗಳು ಮಾತ್ರ)ಗಳನ್ನು ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ ಅನುದಾನ ಬಿಡುಗಡೆ ಮಾಡಲು ನಿರ್ಧರಿಸಿದ್ದು ಅದರಂತೆ ಈ ಆದೇಶ

## ಆದೇಶ

**ಸಂಖ್ಯೆ: ಅಸಂನಿ/ಅಕಾಮೂಸೌಅಕಾ/ಸಿಆರ್-50/2017-18** **ದಿನಾಂಕ: 23.08.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ನಾಧರಿಸಿ ಉಲ್ಲೇಖ(3)ರ ಸರ್ಕಾರದ ಆದೇಶದಲ್ಲಿ ದಿನಾಂಕ: 21.07.2017ರ ಆದೇಶದಲ್ಲಿ ಸೂಚಿಸಿರುವ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ರಾಜ್ಯದಲ್ಲಿನ **ಒಟ್ಟು 224 ವಿಧಾನಸಭಾ ಕ್ಷೇತ್ರಗಳಿಗೆ ತಲಾ ರೂ. 50.00 ಲಕ್ಷಗಳನ್ನು** ಹಾಗೂ ಕೊಳಗೇರಿ ಅಭಿವೃದ್ಧಿ